ಇ) ಇಲ್ಲ

ಈ) ಕುಂದಾಪುರ ಮತ್ತು ಉಡುಪಿ ತಾಲ್ಲೂಕಿನಲ್ಲಿ ಕಳೆದ 2 ವರ್ಷಗಳಿಂದ ಯುವಕ ಮಂಡಲ ಯುವತಿ ಮಂಡಳಿಗಳಿಗೆ ಕೊಡಮಾಡಿಗಾಗಿ ಮಂಜೂರಾದ ಹಣದ ವಿವರಗಳು ಈ ಕೆಳಕಂಡಂತಿದೆ.

		ರೂ.
ಕುಂದಾಪುರ	-	20,000.00
ಉಡುಪಿ	-	57,000.00

3 ಯುವಕ ಮಂಡಲಗಳಿಗೆ ಈ ಕೆಳಕಂಡ ಸ್ಥಳಗಳಲ್ಲಿ ಕಟ್ಟಡ ಕಟ್ಟಲು ಹಣ ಮಂಜೂರು ಮಾಡಲಾಗಿದೆ.

1.	ಆದರ್ಶ ಯುವಕ ಮಂಡಲಕ್ಕಾಗಿ ಹಕ್ಲು	-	ಕುಂದಾಪುರ
2.	ಶ್ರೀ ಗುರು ರಾಘವೇಂದ್ರ ಭಜನಾ ಮಂಡಲಿದ್ದು	-	ಉಡುಪಿ
3.	ಯುವಕ ಮಂಡಲ ಕುಂಜೆಬೆಟ್ಟು	-	ಉಡುಪಿ

ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜಿನ ಹುದ್ದೆಗಳು

2248 - ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ಮತ್ತು ಉಡುಪಿ ತಾಲ್ಲೂಕುಗಳಲ್ಲಿ ಪ್ರೌಢಶಾಲೆ ಮತ್ತು ಪದವಿ ಪೂರ್ವಕಾಲೇಜುಗಳಲ್ಲಿ ಮಂಜೂರಾದ ವಿವಿಧ ಹುದ್ದೆಗಳೆಷ್ಟು? (ಭೋದಕ ಹಾಗೂ ಬೋಧಕೇತರ ವಿವರವನ್ನು ಒದಿಗಿಸುವುದು).

ಆ) ಕೊರತೆ ಇರುವ ಹುದ್ದೆಗಳೆಷ್ಟು.

ಇ) ಈ ಕೊರತೆ ತುಂಬಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಹೆಚ್. ಜಿ ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕುಂದಾಪುರ ಮತ್ತ ಉಡುಪಿ ತಾಲ್ಲೂಕುಗಳ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಿಗೆ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ವಿವರ ಕೆಳಕಂಡಂತಿವೆ.

	ಕುಂದಾಪುರ ತಾ:	ಉಡುಪಿ ತಾ:
ಪ್ರೌಢಶಾಲೆ : ಬೋಧಕ :	261	328
ಬೋಧಕೇತರ :	37	49
ಪದವಿ ಪೂರ್ವ ಕಾಲೇಜು : ಬೋಧಕ :	98	130
ಬೋಧಕೇತರ :	37	49

ಆ) ಕುಂದಾಪುರ ತಾಲ್ಲೂಕಿನ ಪ್ರೌಢಶಾಲೆಗಳಲ್ಲಿ 41. ಭೋದಕ ಹುದ್ದೆ ಹಾಗೂ 3 ಬೋಧಕೇತರ ಹುದ್ದೆಗಳು ಹಾಗೂ ಉಡುಪಿ ತಾಲ್ಲೂಕಿನ ಪ್ರೌಢ ಶಾಲೆಗಳಲ್ಲಿ 18 ಬೋಧಕ ಹಾಗೂ 10 ಬೋಧಕೇತರ ಹುದ್ದೆಗಳು ಖಾಲಿ ಇವೆ.

ಪದವಿಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ ಎರಡೂ ತಾಲ್ಲೂಕುಗಳಲ್ಲಿ 74 ಬೋಧಕ ಹುದ್ದೆಗಳು ಹಾಗೂ 13 ಬೋಧಕೇತರ ಹುದ್ದೆಗಳು ಖಾಲಿ ಇವೆ.

ಇ) ಬೋಧಕ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ. ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಲೋಕಸೇವಾ ಆಯೋಗವು ಪ್ರಕಟಣೆ ಹೊರಡಿಸಿದ್ದು ಅವರಿಂದ ಅಂತಿಮ ಆಯ್ಕೆಪಟ್ಟಿ ಬಂದ ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಪ್ರೌಢಶಿಕ್ಷಣ ವಿಭಾಗದಲ್ಲಿ ಖಾಲಿ ಇರುವ ಭೋದಕ ಹುದ್ದೆಗಳನ್ನು ತುಂಬುವ ಬಗ್ಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ನು ರೂಪಿಸುವ ವಿಷಯವು ಅಂತಿಮ ಹಂತದಲ್ಲಿದ್ದು ಅದನ್ನು ಹೊರಡಿಸಿದ ಕೂಡಲೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಬೋಧಕೇತರ ಹುದ್ದೆಗಳನ್ನು ತುಂಬುವ ಬಗ್ಗೆ ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದು ಈ ಆದೇಶವನ್ನು ಸಡಿಲಿಸಿದ ಕೂಡಲೇ ಖಾಲಿ ಹುದ್ದೆಗಳನ್ನು ತುಂಬಲಾಗುವುದು.

ರಾಜ್ಯದಲ್ಲಿರುವ ಸಂಚಾರಿ ನೇತ್ರ ಆಸ್ಪತ್ರೆಗಳು.

2250 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಂಚಾರಿ ನೇತ್ರ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಈ ಆಸ್ಪತ್ರೆಗಳಲ್ಲಿ ಸರ್ಕಾರ ಹಾಗೂ ಖಾಸಗಿಯವರು ನಡೆಸುತ್ತಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಇ) ಬೆಂಗಳೂರಿನಲ್ಲಿರುವ ಸಂಚಾರಿ ನೇತ್ರ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಈ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಸಂಚಾರಿ ನೇತ್ರ ಆಸ್ಪತ್ರೆ ಇರುವುದೇ?

ಉ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಸಂಚಾರಿ ನೇತ್ರ ಆಸ್ಪತ್ರೆಗಳನ್ನು ಸ್ಥಾಪಿಸಲು ತೆಗೆದುಕೊಂಡಿರುವ ಕ್ರಮ.

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ 26 ಸಂಚಾರಿ ನೇತ್ರ ಆಸ್ಪತ್ರೆಗಳಿವೆ.

ಆ) ಈ ಆಸ್ಪತ್ರೆಗಳಲ್ಲಿ ಸರ್ಕಾರದ ವತಿಯಿಂದ 21 ಮತ್ತು ಖಾಸಗಿಯವರಿಂದ 5 ಆಸ್ಪತ್ರೆಗಳು ಕಾರ್ಯ ನಿರ್ವಹಿಸುತ್ತಿರುವುವು.